## ಬೆಂಗಳೂರಲ್ಲಿ ರಾಶಿ ರಾಶಿ ಜಿಲೆಟಿನ್ ಕಡ್ಡಿಗಳಿದ್ದ ಬಾಕ್ಸ್‌ಗಳು ಪತ್ತೆ.!!



ಬೆಂಗಳೂರು: ನಗರದಲ್ಲಿ ಬೃಹತ್ ಪ್ರಮಾಣದ 50 ಡಿನೋನೇಟ-ರ್ ಕಡ್ಡಿಗಳು ಹಾಗೂ 225 ಜಿಲೆಟಿನ್ ಕಡ್ಡಿಗಳಿದ್ದ ಬಾಕ್ಸ್ ಗಳು ಪತ್ತೆಯಾಗಿದ್ದು, ಕೆಲ ಕಾಲ ಆತಂಕ ಸೃಷ್ಟಿಯಾಗಿತ್ತು. ಆವಲಹಳ್ಳಿಯ ಕಾಡ ಅಗ್ರಹಾರ ಬಳಿ ಅನುಮಾನಾಸ್ಪದವಾಗಿ ಬಾಕ್ಸ್ ಗಳು ಇವೆ ಎಂಬ ಸುದ್ದಿ ತಿಳಿಯುತ್ತಿದ್ದಂತೆ ಆವಲಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ದಾವಿಸಿ ಬಾಕ್?ಸಗಳನ್ನು ತೆರೆದು ನೋಡಿದಾಗ ಅದರಲ್ಲಿ ಸ್ಫೋಟಕ ವಸ್ತುಗಳಾದ ಜಿಲೆಟಿನ್ ಕಡ್ಡಿಗಳು ಹಾಗೂ ಡಿನೋನೇಟರ್ ಕಡ್ಡಿಗಳು ಪತ್ತೆಯಾಗಿವೆ.

ಈ ಜಿಲೆಟಿನ್ ಕಡ್ಡಿಗಳು ವೆಂಕಟರಾಮ ರೆಡ್ಡಿ ಎಂಬಾತನಿಗೆ ಸೇರಿದ್ದು ಎಂಬುವುದು ಗೊತ್ತಾಗಿದೆ. ಬಂಡೆ ಒಡೆಯಲು ಈ ಜಿಲೆಟಿನ್ ಕಡ್ಡಿಗಳನ್ನು ಸಂಗ್ರಹಿಸಿಟ್ಟಿದ್ದಾಗಿ ಆತ ಹೇಳಿದ್ದಾನೆ.ಪೊಲೀಸರು ವೆಂಕಟರಾಮರೆಡ್ಡಿ ಮತ್ತು ಆತನ ಕೆಲಸಗಾರರನ್ನು ವಶಕ್ಕೆ ಪಡೆಯಲಾಗಿದೆ. ಇವರನ್ನು ವಿಚಾರಣೆಗೆ ಒಳಪಡಿಸಿದಾಗ ಯಾವುದೇ ದಾಖಲಾತಿ ಇಲ್ಲದೆ ಈ ಜಿಲೆಟಿನ್ ಕಡ್ಡಿಗಳನ್ನು ಸಂಗ್ರಹಿಸಿ ಇಟ್ಟಿರುವುದು ಗೊತ್ತಾಗಿದೆ. ಠಾಣೆಗೆ ಇದುವರೆಗೆ ಲೈಸ್ಸೆ? ಹಾಜರು ಪಡಿಸಿಲ್ಲ. ಅಕ್ರಮವಾಗಿ ಸ್ಫೋಟಕ ವಸ್ತುಗಳನ್ನು ಸಂಗ್ರಹಿಸಿಟ್ಟಿದ್ದರ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.ಈ ಸ್ಫೋಟಕಗಳನ್ನು ಕೇವಲ ಬಂಡೆ ಒಡೆಯಲು ಸಂಗ್ರಹಿಸಿಡಲಾಗಿತ್ತೇ ಅಥವಾ ಬೇರೆ ಯಾವ ಕಾರಣಕ್ಕೆ ಸಂಗ್ರಹಿಸಿಟ್ಟಿದ್ದರು ಎಂಬ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ.

## ಶಾಸಕ ಬಸವರಾಜ ರಾಯರೆಡ್ಡಿಯವರಿಗೆ ಸಚಿವ ಸ್ಥಾನ ನೀಡುವಂತೆ ಲಂಕೇಶ್ ಎಚ್ ಮರಕಟ್ಟ ಮನವಿ

ಯಲಬುರ್ಗಾ: ಕ್ಷೇತ್ರದ ಶಾಸಕ ಬಸವ ರಾಜ ರಾಯರೆಡ್ಡಿಯವ-ರಿಗೆ ಸಿಎಂ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರ್ಕಾರದಲ್ಲಿ ಹಿರಿತನವನ್ನು ಗುರ್ತಿಸಿ ಸಚಿವ ಸ್ಥಾನವನ್ನು ಕಲ್ಪಿಸಿಕೊಡುವಂತೆ ಲಂಕೇಶ್ ಎಚ್ ಮರಕಟ್ಟ ಬ್ಲಾಕ್ ಕಾಂಗ್ರೆಸ್ ಸಮಿತಿಯ ಸಾಮಾಜಿಕ ಜಾಲತಾಣ ಬ್ಲಾಕ್ ಕಾರ್ಯ ದರ್ಶಿ ಮನವಿ ಮಾಡಿದ್ದಾರೆ.



ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿರುವ ಅವರು, ಕ್ಷೇತ್ರದಲ್ಲಿ ಆರು ಭಾರಿ ಶಾಸಕರಾಗಿ, ಸಂಸದರಾಗಿ,ಎರಡು ಭಾರಿ ಸಚಿವರಾಗಿ, ದೆಹಲಿ ವಿಶೇಷ ಪ್ರತಿನಿಧಿಯಾಗಿ,ಸಿಎಂ ಆರ್ಥಿಕ ಸಲಹೆಗಾರರಾಗಿ ಸೇವೆ ಸಲ್ಲಿಸಿರುವ ಶಾಸಕ ಬಸವರಾಜ ರಾಯರೆಡ್ಡಿಯವರು ಜನಪ್ರಿಯತೆ ಗಳಿಸಿಕೊಂಡವರು. ಕ್ಷೇತ್ರದಲ್ಲಿ ಶಿಕ್ಷಣ ಕ್ರಾಂತಿಯನ್ನು ಮಾಡುವ ಮೂಲಕ ಸಾಕಷ್ಟು ಅಭಿವೃದ್ಧಿ = ಮಾಡುವ ಮೂಲಕ ರಾಜ್ಯದಲ್ಲಿ = ಮಾದರಿ ಕ್ಷೇತ್ರವನ್ನಾಗಿ ಮಾಡಿರುವ ಶಾಸಕ ಬಸವರಾಜ ರಾಯರಡ್ಡಿ ಯವರ ಹಿರಿತನ, ನ ಅನುಭವವನ್ನು ಗುರ್ತಿಸಿ, ಸಿಎಂ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರ್ಕಾರದಲ್ಲಿ ಎರಡನೇ ಪಟ್ಟಿಯಲ್ಲಿ ಸಚಿವನ್ನಾಗಿ ಆಯ್ಕೆ = ಮಾಡುವಂತೆ. ಮನವಿ ಮಾಡಿಕೊಂಡಿದ್ದಾರೆ

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಟಿಎಂಸಿ ಹಾಗೂ ರಾಜ್ಯಸಭೆ ಸದಸ್ಯತ್ವಕ್ಕೂ ಸುಖೇಂದು ಶೇಖರ್ ರಾಯ್ ರಾಜೀನಾಮೆ

ಕೋಲ್ಕತ್ತಾ/ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ತೃಣಮೂಲ ಕಾಂಗ್ರೆಸ್ (ಟಿಎಂಸಿ)ನ ಹಿರಿಯ ನಾಯಕ ಹಾಗೂ ರಾಜ್ಯಸಭಾ ಸದಸ್ಯ ಸುಖೇಂದು ಶೇಖರ್ ರಾಯ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವುದರ ಜೊತೆಗೆ ರಾಜ್ಯಸಭೆ ಸದಸ್ಯತ್ವಕ್ಕೂ ರಾಜೀನಾಮೆ ಸಲ್ಲಿಸಿದ್ದಾರೆ.



ಈ ಬೆಳವಣಿಗೆಯು ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿಗೆ ಮತ್ತೊಂದು ದೊಡ್ಡ ಹಿನ್ನಡೆಯಾಗಿ ಪರಿಗಣಿಸಲಾಗಿದ್ದು, ಪಕ್ಷದೊಳಗಿನ ಅಸಮಾಧಾನ ಇದೀಗ ಸಂಸತ್ತಿನ ಸದಸ್ಯರ ಮಟ್ಟಕ್ಕೂ ವ್ಯಾಪಿಸುತ್ತಿರುವ ಸೂಚನೆ ನೀಡಿದೆ.

ಟಿಎಂಸಿಯ ಸಂಸ್ಥಾಪಕ ಸದಸ್ಯರಲ್ಲಿ ಒಬ್ಬರಾಗಿರುವ ಹಾಗೂ ಸಂಸತ್ತಿನಲ್ಲಿ ಪಕ್ಷದ ಪ್ರಮುಖ ಮುಖವಾಗಿದ್ದ ರಾಯ್, ಇಂಡಿಯಾ ಮೈತ್ರಿಕೂಟದ ಸಭೆ ನಡೆಯಲಿದ್ದ ಕೆಲವೇ ಗಂಟೆಗಳ ಮೊದಲು ನವದೆಹಲಿಯಲ್ಲಿ ತಮ್ಮ ನಿರ್ಧಾರವನ್ನು ಪ್ರಕಟಿಸಿದರು.ಈ ಸಭೆಯಲ್ಲಿ ಮಮತಾ ಬ್ಯಾನರ್ಜಿ ಹಾಗೂ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಭಾಗವಹಿಸಲಿದ್ದರು. ರಾಯ್ ಅವರ ರಾಜೀನಾಮೆ, ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ಪಕ್ಷದೊಳಗೆ ನಡೆದ ಅಪೂರ್ವ ಬಂಡಾಯದ ಕೆಲವೇ ದಿನಗಳ ಬಳಿಕ ಬಂದಿದೆ. 58 ಟಿಎಂಸಿ ಶಾಸಕರು ಪಕ್ಷದ ಅಧಿಕೃತ ಅಭ್ಯರ್ಥಿಯಾಗಿದ್ದ ಶೋವಂದೇಬ್ ಚಟ್ಟೋಪಾಧ್ಯಾಯ ಅವರನ್ನು ತಿರಸ್ಕರಿಸಿ ರಿತಬ್ರತಾ ಬ್ಯಾನರ್ಜಿಅವರಿಗೆ ವಿರೋಧ ಪಕ್ಷದ ನಾಯಕ ಸ್ಥಾನಕ್ಕೆ ಬೆಂಬಲ ಸೂಚಿಸಿದ್ದರು. ಈ ಬಂಡಾಯದ ಪರಿಣಾಮವಾಗಿ ವಿಧಾನಸಭಾಧ್ಯಕ್ಷರು ರಿತಬ್ರತ ಬ್ಯಾನರ್ಜಿ ಅವರನ್ನು ಅಧಿಕೃತವಾಗಿ ವಿರೋಧ ಪಕ್ಷದ ನಾಯಕರಾಗಿ ಮಾನ್ಯತೆ ನೀಡಿದ್ದು, ವಿಧಾನಸಭಾ ಚುನಾವಣೆಯ ಸೋಲಿನ ಬಳಿಕ ಪಕ್ಷದೊಳಗಿನ ಭಿನ್ನಾಭಿಪ್ರಾಯಗಳು ಬಹಿರಂಗಗೊಂಡಿದ್ದವು. ತಮ ರಾಜೀನಾಮೆ ಪತ್ರದಲ್ಲಿ ರಾಯ್, ಪಕ್ಷದ ಸಂಘಟನೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನೆಲೆಸಿದೆ ಎಂದು ಆರೋಪಿಸಿದ್ದಾರೆ. ಪಕ್ಷದ ವಿರುದ್ಧ ಸಾರ್ವಜನಿಕ ಅಸಮಾಧಾನ ಅಪಾಯಕಾರಿ ಮಟ್ಟಕ್ಕೆ ತಲುಪಿದೆ ಎಂದೂ ಅವರು ಹೇಳಿದ್ದಾರೆ.

# ಸಚಿವ ಸಂಪುಟದಲ್ಲಿ ಅಲ್ಪಸಂಖ್ಯಾತ ಸಮುದಾಯದ ಶಾಸಕರ ಕಡೆಗಣನೆ
# ನರಗುಂದದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ವಿರುದ್ಧ ಪ್ರತಿಭಟನೆ

ನರಗುಂದ: ಡಿ.ಕೆ.ಶಿವಕುಮಾರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಶಾಸಕ ಜಮೀರಹ್ಮದ್ ಸೇರಿದಂತೆ ಅಲ್ಪಸಂಖ್ಯಾತ ಸಮುದಾಯದ ಶಾಸಕರನ್ನು ಕಡೆಗಣಿಸಲಾಗುತ್ತಿದೆ. ಅವ-ರಿಗೆ ಉನ್ನತ ದರ್ಜೆ ಸಚಿವ ಸ್ಥಾನಮಾನ ನೀಡಬೇಕೆಂದು ಆಗ್ರಹಿಸಿ ನರಗುಂದದ ಶಿವಾಜಿ ವರ್ತುಲದಲ್ಲಿ ಮೇ.12 ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮುಸ್ಲಿಂ ಸಮಾಜದ ಹಿರಿಯ ಮುಖಂಡ ಬಿ.ಎಚ್.ಪಠಾಣ ತಿಳಿಸಿದರು.



ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಲ್ಪಸಂಖ್ಯಾತರ ನೀಡಿದ ಅತ್ಯಧಿಕ ಮತಗಳಿಂದಲೇ ಅಧಿಕಾರದ ಗದ್ದುಗೆಯನ್ನೇರಿದ ಕಾಂಗ್ರೆಸ್ ಸರ್ಕಾರದಲ್ಲಿ ಮುಸ್ಲಿಂರನ್ನು ಸಂಪೂರ್ಣ ಕಡೆಗಣಿಸಲಾಗುತ್ತಿದೆ. ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಂಪುಟದಲ್ಲಿ ಅತ್ಯುತ್ತಮ ಕೆಲಸ ಮಾಡಿದ್ದ ಶಾಸಕ ಬಿ.ಝಡ್.ಜಮೀರಅಹ್ಮದ್ ಅವರನ್ನು ಡಿ.ಕೆ.ಶಿವಕುಮಾರ ಸಂಪುಟದಲ್ಲಿ ಕೈಬಿಟ್ಟಿರುವುದು ಖಂಡನೀಯ. ಸಮಾಜದ ಎಲ್ಲ ಜಾತಿ,ಧರ್ಮ,ಮತ, ಪಂಗಡದವರ ಧ್ವನಿಯಾಗಿದ್ದ ಜಮೀರ್‌ಅಹ್ಮದ್ ಪಕ್ಷಾತೀತ ನಾಯಕರಾಗಿ ಬೆಳೆದಿದ್ದಾರೆ. ಇವರ ರಾಜಕೀಯ ಬೆಳವಣಿಗೆ ಸಹಿಸದೇ ಕೆಲವು ಕುತಂತ್ರ ಶಕ್ತಿಗಳು ಜಮೀರ್ ಅವರಿಗೆ ಸಚಿವ ಸ್ಥಾನ ಕೈತಪ್ಪುವಂತೆ ಮಾಡಿದ್ದಾರೆ.

ಸದಾಕಾಲ ಜನಪರ ಕಾಳ-ಜಿಯೊಂದಿಗೆ ಶಾಸಕರಾಗಿ ಆಯ್ಕೆಗೊಂಡಿರುವ ಜಮೀರಹ್ಮದ್, ತನ್ವೀರ ಶೇಠ್,ಖನೀಜಾ ಫಾತೀಮಾ, ಸಲೀಂಅಹ್ಮದ್ ಅವರ ಸೇವೆಯನ್ನು ಗುರುತಿಸಿ ಪಕ್ಷದ ಹೈಕಮಾಂಡ್ ತಕ್ಷಣವೇ ಸಚಿವ ಸ್ಥಾನ ನೀಡಬೇಕು. ಮುಸ್ಲಿಂ ಸಮಾಜದ ಮುಖಂಡರನ್ನು ರಾಜಕೀಯವಾಗಿ ಕಡೆಗಣಿಸುತ್ತಿರುವ ಪಕ್ಷದ ಮುಖಂಡರ ನಡೆ ಖಂಡಿಸಿ ಜೂ.12 ರಂದು ಬೆಳಗ್ಗೆ 11 ಗಂಟೆಗೆ ಪಟ್ಟಣದ ಶಿವಾಜಿ ವರ್ತುಲದಲ್ಲಿ ರಸ್ತೆತಡೆದು ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಫಾರೂಕ್ ಮಜ್ಜಿದಮನಿ, ಭಾಷೇಸಾಬ ಪಠಾಣ, ಮೋದಿನಸಾಬ ಮುಳಗುಂದ, ಬುಡ್ನೇಸಾಬ ಮಟಗೇರ, ದಾವೂದಖಾನ್ ಲೋಧಿ, ಬಾಷೇಸಾಬ ಗದಗ, ಮಕ್ತುಮ ಮುಲ್ಲಾನವರ, ಶೌಕತಲಿ ನಾಲಬಂದ, ರಫೀಕ, ಇಬ್ರಾಹಿಂ ಸವಟಗಿ ಉಪಸ್ಥಿತರಿದ್ದರು.

# ಅಮೆರಿಕ ಪ್ರವಾಸಿ ವೀಸಾ ನೀಡಿಕೆಗೆ ಪೈಲಟ್ ಯೋಜನೆ

ವಾಷಿಂಗ್ಟನ್: ವ್ಯಾಪಾರ ಅಥವಾ ಪ್ರವಾಸಿ ವೀಸಾಗಳನ್ನು ಅಮೆರಿಕಕ್ಕೆ ಪಡೆಯಲು ಬಯಸುವ ವಿದೇಶೀಯರಿಗೆ ಪ್ರೀಮಿಯಂ ತ್ವರಿತ ಸೇವೆಯನ್ನು ಯುಎಸ್ ಸ್ಟೇಟ್ ಡಿಪಾರ್ಟ್ಮೆಂಟ್ ನೀಡಲಿದೆ. ಇದು ಅರ್ಜಿದಾರರಿಗೆ 185 ಯುಎಸ್ ಡಾಲರ್ ಆರಂಭಿಕ ಶುಲ್ಕದ ಜೊತೆಗೆ 750 ಯುಎಸ್ ಡಾಲರ್ ವೆಚ್ಚವಾಗಲಿದೆ.

ಈ ವಾರ ಫೆಡರಲ್ ರಿಜಿಸ್ಟರ್‌ನಲ್ಲಿ ಪ್ರಕಟಿಸಲಾಗುವ ಸೂಚನೆಯಲ್ಲಿ, ಆಯ್ದ ಯುಎಸ್ ರಾಯಭಾರ ಕಚೇರಿಗಳು ಮತ್ತು ಕಾನ್ಸುಲೇಟ್‌ಗಳಲ್ಲಿ ಪಾವತಿ ಮಾಡಿದ 10 ದಿನಗಳಲ್ಲಿ ಸಂದರ್ಶನಕ್ಕಾಗಿ ಅಪಾಯಿಂಟ್‌ಮೆಂಟ್ ನಿಗದಿಪಡಿಸಲು ವೀಸಾ ಅರ್ಜಿದಾರರಿಗೆ ಯು-ಎಸ್ ಡಾಲರ್ 750 ಪಾವತಿಸಲು ಅವಕಾಶ ನೀಡುವ ಪೈಲಟ್ ಕಾರ್ಯಕ್ರಮವನ್ನು ಇಲಾಖೆ ಅನಾವರಣಗೊಳಿಸುತ್ತದೆ. ಅಸೋಸಿಯೇಟೆಡ್ ಪ್ರೆಸ್ ಮತ್ತು ಅನಾಮಧೇಯತೆಯ ಸ್ಥಿತಿಯಲ್ಲಿ ಮಾತನಾಡಿದ ಸ್ಟೇಟ್ ಡಿಪಾರ್ಟ್‌ಮೆಂಟ್ ಅಧಿಕಾರಿಯೊಬ್ಬರು ಪಡೆದ ಆಂತರಿಕ ದಾಖಲೆಗಳ ಪ್ರಕಾರ, ಪೈಲಟ್ ಕಾರ್ಯಕ್ರಮವು ಜುಲೈ 1 ರಿಂದ ಡಿಸೆಂಬರ್ 31 ರವರೆಗೆ ನಡೆಯಲಿದೆ ಎಂದು ಅಸೋಸಿಯೇಟೆಡ್ ಪ್ರೆಸ್ ಮತ್ತು ಕಾರ್ಯಕ್ರಮವನ್ನು ಇನ್ನೂ ಘೋಷಿಸದ ಕಾರಣ ಅನಾಮಧೇಯತೆಯ ಸ್ಥಿತಿಯಲ್ಲಿ ಮಾತನಾಡಿದ ಸ್ಟೇಟ್ ಡಿಪಾರ್ಟ್‌ಮೆಂಟ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಟ್ರಂಪ್ ಆಡಳಿತವು ಅಮೆರಿಕಕ್ಕೆ ಪ್ರವೇಶಿಸುವುದನ್ನು ಹೆಚ್ಚು ಕಷ್ಟಕರವಾಗಿಸುವ ಒತ್ತಡದಿಂದ ಉಂಟಾದ ಪರಿಸ್ಥಿತಿಗಳನ್ನು ಸರಾಗಗೊಳಿಸುವ ಸಂಭಾವ್ಯ ಪ್ರಯತ್ನವಾಗಿದೆ. ವಿದೇಶಿಯರ ವಲಸೆಯ ಹಲವು ರೂಪಗಳನ್ನು ಆಡಳಿತವು ಹತ್ತಿಕ್ಕಿದೆ ? ಕೆಲವು ದೇಶಗಳಲ್ಲಿ, ಮುಖ್ಯವಾಗಿ ಆಫ್ರಿಕನ್ ದೇಶಗಳಲ್ಲಿ ವೀಸಾ ಪ್ರಕ್ರಿಯೆಗಾಗಿ 15,000 ವರೆಗಿನ ಬಾಂಡ್‌ಗಳನ್ನು ಪಾವತಿಸಬೇಕೆಂದು ಒತ್ತಾಯಿಸುತ್ತಿದೆ ಮತ್ತು ಸಾಮಾಜಿಕ ಮಾಧ್ಯಮ ಖಾತೆಗಳು ಸೇ-ರಿದಂತೆ ವರ್ಷಗಳ ವೈಯಕ್ತಿಕ ಇತಿಹಾಸವನ್ನು ಪರಿಶೀಲಿಸುವ ಅಗತ್ಯವಿದೆ. ಹೊಸ ಅವಶ್ಯಕತೆಗಳು ಪ್ರಪಂಚದಾದ್ಯಂತ ವೀಸಾ ಪ್ರಕ್ರಿಯೆಯಲ್ಲಿ ವಿಳಂಬವನ್ನು ಉಂಟುಮಾಡಿವೆ, ಇದು




ದೂರುಗಳನ್ನು ಪ್ರೇರೇಪಿಸಿದೆ.ವೀಸಾ ಮನ್ನಾ ಕಾರ್ಯಕ್ರಮದ ಭಾಗವಾಗಿರದ ದೇಶಗಳ ನಾಗರಿಕರಿಗೆ ವೀಸಾ ಸಂದರ್ಶನಗಳಿಗಾಗಿ ಕಾಯುವ ಸಮಯಗಳು ಹಲವಾರು ತಿಂಗಳುಗಳಾಗಿರಬಹುದು, ಇಲ್ಲದಿದ್ದರೆ ಹೆಚ್ಚು. ಆದರೆ ಐಚ್ಛಿಕ ಪ್ರೀಮಿಯಂ ಆಡ್-ಆನ್ ಸೇವೆಗಾಗಿ ಶುಲ್ಕವನ್ನು ಪಾವತಿಸುವುದರಿಂದ ವೀಸಾ ನೀಡಲಾಗುತ್ತದೆ ಎಂದು ಖಾತರಿಪಡಿಸುವುದಿಲ್ಲ. ಜುಲೈ 1 ರಂದು ಕಾರ್ಯಕ್ರಮವು ಜಾರಿಗೆ ಬರುವ ಮೊದಲು ತ್ವರಿತ ಸೇವೆ ಲಭ್ಯವಿರುವ ರಾಯಭಾರ ಕಚೇರಿಗಳು ಮತ್ತು ದೂತಾವಾಸಗಳನ್ನು ಘೋಷಿಸಲಾಗುವುದು. ಪೈಲಟ್ ಕಾರ್ಯಕ್ರಮವು ವರ್ಷದ ಅಂತ್ಯದವರೆಗೆ ನಡೆಯುತ್ತದೆ ಆದರೆ ಬೇಡಿಕೆಯನ್ನು ಅವಲಂಬಿಸಿ ವಿಸ್ತರಿಸಬಹುದಾಗಿದೆ.

# ರೌಡಿಶೀಟರ್ ಜೊತೆ ಬಂಡೀಪುರ ಅರಣ್ಯದಲ್ಲಿ ಎಣ್ಣೆ ಪಾರ್ಟಿ ಮಾಡಿದ ಆರ್‌ಎಫ್‌ಒ ಅಮಾನತು

ಚಾಮರಾಜನಗರ: ರೌಡಿಶೀಟರ್ ಜೊತೆ ಎಣ್ಣೆ ಪಾರ್ಟಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಹಿನ್ನಲೆಯಲ್ಲಿ ಬಂಡೀಪುರದ ಮದ್ದೂರು ವನ್ಯಜೀವಿ ವಲಯದ ವಲಯ ಅರಣ್ಯಾಧಿಕಾರಿ ಡಿ. ಪುನೀತ್ ಕುಮಾರ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ಸರ್ಕಾರದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಅರಣ್ಯದ ಮದ್ದೂರು ವಲಯದ ಹುಲಿ ಕಟ್ಟೆ ಎಂಬಲ್ಲಿರುವ ಕಳ್ಳಬೇಟೆ ತಡೆ ಶಿಬಿರದ ಮುಂಭಾಗದಲ್ಲೇ ಕುಖ್ಯಾತ ರೌಡಿಶೀಟರ್ ಸತೀಶ್ ಯಾನೆ ಮಹದೇವಪ್ರಸಾದ್ ಹಾಗೂ ಆತನ ಸ್ನೇಹಿತರಾದ ಗಂಗಾಧರ್ ಮತ್ತು ಚೇತನ್ ಅಕ್ರಮವಾಗಿ ಪ್ರವೇಶಿಸಿ ಮದ್ಯದ ಪಾರ್ಟಿ ಮಾಡಿದ್ದರು. ಶಿಬಿರದ ಸೌರ ಫಲಕವನ್ನೇ ಟೇಬಲ್ ಮಾಡಿಕೊಂಡು, ಅದರ ಮೇಲೆ ಮದ್ಯದ ಬಾಟಲಿಗಳು, ಪ್ಲಾಸ್ಟಿಕ್ ಲೋಟ ಹಾಗೂ ತಿಂಡಿಯ ಪ್ಯಾಕೆಟ್‌ಗಳನ್ನು ಇಟ್ಟು



ಮೋಜು ಮಾಡಿದ್ದ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದ್ದವು. ಅತ್ಯಂತ ಸಂರಕ್ಷಿತ ಹಾಗೂ ವನ್ಯಜೀವಿಗಳ ಓಡಾಟವಿರುವ ಪ್ರಮುಖ ವಲಯದೊಳಗೆ ಇಂತಹ ಕೃತ್ಯ ನಡೆದಿದ್ದಕ್ಕೆ ಪರಿಸರವಾದಿಗಳಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಈ ಅಕ್ರಮ ಪಾರ್ಟಿಯ ಹಿಂದೆ ಸ್ಥಳೀಯ ಅರಣ್ಯ ಸಿಬ್ಬಂದಿಯ ಕೈವಾಡವಿರುವ ಶಂಕೆ ವ್ಯಕ್ತವಾದ ಬೆನ್ನಲ್ಲೇ, ಬಂಡೀಪುರ ಹುಲಿ ಯೋಜನೆ ನಿರ್ದೇಶಕ ನಂದೀಶ್ ಅವರು ಎಸಿಎಫ್ ಸುರೇಶ್ ಅವರಿಗೆ ತನಿಖೆ ನಡೆಸಿ ವರದಿ ನೀಡುವಂತೆ ಸೂಚಿಸಿದ್ದರು.

ಎಸಿಎಫ್ ನೀಡಿದ ತನಿಖಾ ವರದಿಯಲ್ಲಿ, ಮದ್ದೂರು ವಲಯದ ಆರ್-ಎಫ್‌ಒ ಪುನೀತ್ ಕುಮಾರ್ ಅವರು ತಮಗಿಂತ ಮೇಲಧಿಕಾರಿಗಳಿಗೆ ಈ ಗಂಭೀರ ವಿಷಯದ ಬಗ್ಗೆ ಯಾವುದೇ ಮಾಹಿತಿ ನೀಡದೆ ಮುಚ್ಚಿಟ್ಟಿರುವುದು ಹಾಗೂ ಫೋಟೋಗಳಲ್ಲಿ ಗುರುತಿಸಲಾದ ಶಂಕಿತರ ಹೆಸರನ್ನು ಅಧಿಕೃತವಾಗಿ ದಾಖಲಿಸದೆ ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗಿದೆ. ಈ ಹಿನ್ನೆಲೆಯಲ್ಲಿ ಇಲಾಖೆಯ ಶಿಸ್ತು ಕ್ರಮಕ್ಕೆ ಬಾಕಿ ಇರುವಂತೆ ಅವರನ್ನು ಅಮಾನತು ಮಾಡಲಾಗಿದೆ.

ಇದಲ್ಲದೆ ಅರಣ್ಯ ಇಲಾಖೆಯು ಅಕ್ರಮ ಪಾರ್ಟಿ ನಡೆಸಿದ್ದ ಮೂವರು ಕಿಡಿಗೇಡಿಗಳ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಗಂಭೀರ ಪ್ರಕರಣ ದಾಖಲಿಸಿದೆ. ಸದ್ಯ ತಲೆಮರೆಸಿಕೊಂಡಿರುವ ರೌಡಿಶೀಟರ್ ಸತೀಶ್ ಮತ್ತು ಆತನ ಪಟಾಲಂಗಾಗಿ ಅರಣ್ಯ ಇಲಾಖೆ ಹಾಗೂ ಗುಂಡ್ಲುಪೇಟೆ ಪೊಲೀಸರು ಜಂಟಿ ಶೋಧ ಕಾರ್ಯ ಆರಂಭಿಸಿದ್ದಾರೆ. ಸಾಮಾನ್ಯ ಜನರಿಗೆ ಕಾಡಿನ ರಸ್ತೆಯಲ್ಲಿ ವಾಹನ ನಿಲ್ಲಿಸಿ ಫೋಟೋ ತೆಗೆಯಲೂ ದಂಡ ವಿಧಿಸುವ ಇಲಾಖೆ, ರೌಡಿಶೀಟ-ರ್‌ಗಳಿಗೆ ಪಾರ್ಟಿ ಮಾಡಲು ಬಿಟ್ಟಿದ್ದಕ್ಕೆ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪರಿಸರ ಹೋರಾಟಗಾರರು ಆಗ್ರಹಿಸಿದ್ದರು.

# ಹೊಳೆಆಲೂರಿನಲ್ಲಿ ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣಾ ಕಾರ್ಯಕ್ರಮ

ಹೊಳೆಆಲೂರ: ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ (ರಿ.), ಹೊಳೆಆಲೂರ ಇವರ ವತಿಯಿಂದ 2026?27ನೇ ಶೈಕ್ಷಣಿಕ ವರ್ಷದ ಅಂಗವಾಗಿ ಹೊಳೆಆಲೂರಿನ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆ, ಸರ್ಕಾರಿ ಬಾಲಕಿಂ-ಯರ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಸಂಸ್ಥೆಯ ಅಧ್ಯಕ್ಷೆ ಶೋಭಾ ಎಸ್. ಆಡಿನ ಅವರು ಮಾತನಾಡಿ, ಶಿಕ್ಷಣವು ಮಕ್ಕಳ ಭವಿಷ್ಯವನ್ನು ರೂಪಿಸುವ ಅತ್ಯಂತ ಶಕ್ತಿಯುತ ಸಾಧನವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅಗತ್ಯವಾದ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವುದು ಸಂಸ್ಥೆಯ ಪ್ರಮುಖ ಧ್ಯೇಯವಾಗಿದೆ. ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶದ ನಿರ್ಮಾತೃಗಳಾಗಿದ್ದು, ಅವರು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಪೂರಕವಾಗುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜಮುಖಿ ಕಾರ್ಯಗಳನ್ನು ಮುಂದುವ-ರಿಸಲಾಗುವುದು ಎಂದು ಹೇಳಿದರು.



ಹೊಳೆಆಲೂರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಗಿರಿತಿಮ್ಮಣ್ಣವರ ಅವರು ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಾಮಾಜಿಕ ಸಂಸ್ಥೆಗಳ ಸಹಕಾರ ಅತ್ಯಗತ್ಯವಾಗಿದೆ. ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯು ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದೆ. ಇಂತಹ ಕಾರ್ಯಗಳು ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಬಗ್ಗೆ ಆಸಕ್ತಿ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ ಎಂದು ಅಭಿಪ್ರಾಯಪಟ್ಟರು. ಹೊಳೆಆಲೂರ ಹೋಬಳಿ ಘಟಕದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಯ್ಯ ವಸ್ತ್ರದ ಅವರು ಮಾತನಾಡಿ, ಶಿಕ್ಷಣದ ಜೊತೆಗೆ ಸಾಹಿತ್ಯ, ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳ ಅರಿವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸಕ್ಕೆ ಅತ್ಯಗತ್ಯವಾಗಿದೆ. ವಿದ್ಯಾರ್ಥಿಗಳು ಓದುವ ಹವ್ಯಾಸವನ್ನು ಬೆಳೆಸಿಕೊಂಡು ಉತ್ತಮ ಜ್ಞಾನ ಸಂಪಾದಿಸುವ ಮೂಲಕ ಸಮಾಜಕ್ಕೆ ಮಾದ-ರಿಯಾಗುವ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಕರೆ ನೀಡಿದರು.

ಅಧ್ಯಕ್ಷೀಯ ನುಡಿಯಲ್ಲಿ ಎಸ್.ಬಿ. ಚನ್ನಪ್ಪಗೌಡ್ರ ಅವರು ಮಾತನಾಡಿ, ಎಸ್. ಎಸ್. ಆಡಿನ ಜನಸೇವಾ ಸಂಸ್ಥೆಯು ಅಲ್ಪಾವಧಿಯಲ್ಲಿಯೇ ಶಿಕ್ಷಣ, ಪರಿಸರ, ಆರೋಗ್ಯ, ಸಾಮಾಜಿಕ ಜಾಗೃತಿ ಹಾಗೂ ಜನಸೇವೆಯ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಕಾರ್ಯಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜದ ಮೆಚ್ಚುಗೆಗೆ ಪಾತ್ರವಾಗಿದೆ. ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲು ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡಿರುವುದು ಅತ್ಯಂತ ಸೂಕ್ತವಾದ ಹಾಗೂ ಶ್ಲಾಘನೀಯ ನಿರ್ಧಾರವಾಗಿದೆ. ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ನೆರವಾಗುವುದು ನಿಜವಾದ ಸಮಾಜಸೇವೆಯಾಗಿದೆ. ಶಿಕ್ಷಣ ಕ್ಷೇತ್ರಕ್ಕೆ ನೀಡುವ ಪ್ರತಿಯೊಂದು ಸಹಾಯವೂ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಪೆನ್ನು, ಪೆನ್ಸಿಲ್ ಸೇರಿದಂತೆ ವಿವಿಧ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯ ರಾಮನಗೌಡ ಸೋಮನಕಟ್ಟಿ, ಶಿಕ್ಷಕರಾದ ಜಿ.ಕೆ. ಅಗಸರ, ಜಿ.ಎನ್. ಕೆಲೂರ, ಜೆ.ಬಿ. ಬೆಂತೂರ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.

“JANASHREE TIMES” Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101.
Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101.